# All India Radio: Bangalore
# Regional Bulletin In Kannada
# 14.11.2024 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**ಮುಖ್ಯಾಂಶಗಳು**

1. **ದೇಶಕ್ಕೆ ಧರ್ಮಸ್ಥಳದ ಗ್ರಾಮೀಣಾಭಿವೃದ್ಧಿ ಯೋಜನೆ ಮಾದರಿ – ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್**
2. **ಬಗರ್ ಹುಕುಂ ಸಭೆ ನಡೆಸಿ ಅರ್ಹರಿಗೆ ಶೀಘ್ರ ಭೂಮಿ ಮಂಜೂರುಗೊಳಿಸುವಂತೆ ಸರ್ಕಾರ ಸೂಚನೆ**
3. **ಕಾಂಗ್ರೆಸ್‌ನ 50 ಶಾಸಕರ ಖರೀದಿ ಯತ್ನ ಆರೋಪ ; ಇಡಿ ತನಿಖೆ ನಡೆಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹ**
4. **ಚಿಕ್ಕಮಗಳೂರಿನ ವಸ್ತಾರೆ ಅರಣ್ಯ ಪ್ರದೇಶದಲ್ಲಿ ಬೀಡುಬಿಟ್ಟ ಕಾಡಾನೆಗಳ ಹಿಂಡು ; ಜನರು ಎಚ್ಚರಿಕೆಯಿಂದ ಇರುವಂತೆ ಅರಣ್ಯ ಇಲಾಖೆ ಎಚ್ಚರಿಕೆ**
5. **ದೇಶಾದ್ಯಂತ ಇಂದು ಮಕ್ಕಳ ದಿನಾಚರಣೆ ; ನೆಹರು ಸಾಧನೆ ಸ್ಮರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**

*****************

ದೇಶದ ಗ್ರಾಮೀಣ ಭಾಗದ ಮಹಿಳೆಯರ ಬಲವರ್ಧನೆಗೆ ಕೇಂದ್ರ ಸರ್ಕಾರ ವಿಶೇಷ ಒತ್ತು ನೀಡಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಧರ್ಮಸ್ಥಳದಲ್ಲಿಂದು ಶ್ರೀ ಕ್ಷೇತ್ರ ಗ್ರಾಮಾಣಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಸ್ವಸಹಾಯ ಸಂಘಗಳಿಗೆ 600 ಕೋಟಿಯಷ್ಟು ಲಾಭಾಂಶ ವಿತರಿಸಿ ಅವರು ಮಾತನಾಡಿದರು. ಕೇಂದ್ರದ ವಿವಿಧ ಯೋಜನೆಗಳಿಂದಾಗಿ ಮಹಿಳೆಯರು ಇಂದು ಸ್ವಾವಲಂಬಿಗಳಾಗಿ ಬದುಕುವ ವಾತಾವರಣ ನಿರ್ಮಾಣವಾಗಿದೆ ಎಂದು ಹೇಳಿದರು.

ರಾಜ್ಯದ ಹಲವು ಭಾಗಗಳ ಮಹಿಳೆಯರು ಸ್ವಸಹಾಯ ಸಂಘಗಳ ಮೂಲಕ ಲಾಭಾಂಶ ಪಡೆದಿರುವುದು ಖುಷಿಯ ವಿಚಾರ. ಇಡೀ ಭಾರತಕ್ಕೆ ಧರ್ಮಸ್ಥಳದ ಗ್ರಾಮಾಭಿವೃದ್ಧಿ ಯೋಜನೆ ಮಾದರಿಯಾಗಿದ್ದು, ನಬಾರ್ಡ್ ಇದನ್ನು ಮಾದರಿಯಾಗಿ ತೆಗೆದುಕೊಂಡು ಅನುಷ್ಠಾನಕ್ಕೆ ತರಲಿದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯಸಭಾ ಸದಸ್ಯ ಡಾ.ಡಿ.ವೀರೇಂದ್ರ ಹೆಗ್ಗಡೆ, ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

*****************

ಬಗರ್ ಹುಕುಂ" ಪ್ರಗತಿ ಪರಿಶೀಲನೆಗೆ ಸಂಬಂಧಿಸಿದಂತೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಇಂದು ರಾಜ್ಯದ ಎಲ್ಲಾ ತಹಶೀಲ್ದಾರ್‌ಗಳ ಜೊತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು. ಸಭೆಯಲ್ಲಿ ಶೀಘ್ರವೇ ಬಗರ್ ಹುಕುಂ ಸಭೆ ನಡೆಸಿ ಅರ್ಹರಿಗೆ ಶೀಘ್ರ ಭೂಮಿ ಮಂಜೂರುಗೊಳಿಸಿ ಸಾಗುವಳಿ ಚೀಟಿ ನೀಡಲು ಸೂಚಿಸಿದರು. ಬಗರ್ ಹುಕುಂ ಅರ್ಜಿಗಳನ್ನ ಶೀಘ್ರ ವಿಲೇವಾರಿಗೊಳಿಸಿದ ಉತ್ತರ ಕನ್ನಡ ಜಿಲ್ಲೆ ಶಿರಸಿ ಹಾಗೂ ಮುಂಡಗೋಡು ತಹಶೀಲ್ದಾರರ ಬಗ್ಗೆ ಮೆಚ್ಚುಗೆ ಸೂಚಿಸಿದ ಅವರು, ಬಗರ್ ಹುಕುಂ ವಿಚಾರದಲ್ಲಿ ಉತ್ತಮ ಸೇವೆ ಸಲ್ಲಿಸುವ ಅಧಿಕಾರಿಗಳಿಗೆ ಪ್ರಶಂಸನಾ ಪತ್ರ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು. ಬಡವರಿಗೆ–ಅರ್ಹ ಫಲಾನುಭವಿಗಳಿಗೆ ಕಾನೂನು ಬದ್ಧವಾಗಿ ಭೂ ಮಂಜೂರುಗೊಳಿಸಲು ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ ಎಂದು ಇದೇ ಸಂದರ್ಭದಲ್ಲಿ ಸ್ಪಷ್ಟಪಡಿಸಿದರು.

*****************

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದಲೂ ಬಿಜೆಪಿ ಅಪರೇಶನ್ ಕಮಲದ ಮೂಲಕ ಶಾಸಕರ ಖರೀದಿ ಯತ್ನವನ್ನು ನಿರಂತರವಾಗಿ ಮಾಡುತ್ತಾ ಬಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮತ್ತೊಮ್ಮೆ ಪುನರುಚರಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಸಮರ್ಥಿಸಿಕೊಂಡಿದ್ದಾರೆ. ಕಾಂಗ್ರೆಸ್‌ನ 50 ಶಾಸಕರಿಗೆ 50 ಕೋಟಿ ಆಮಿಷ ಒಡ್ಡಿರುವುದು ನಿಜ ಎಂದು ಹೇಳಿದ್ದಾರೆ. ಕಾಂಗ್ರೆಸ್ ಶಾಸಕರಿಗೆ ಹಣದ ಆಮಿಷ ವಿಚಾರ ಹಗರಣಗಳನ್ನು ಮುಚ್ಚಿಡಲು ಹೆಣದಿರುವ ಸುಳ್ಳಿನ ಕಂತೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿರುಗೇಟು ನೀಡಿದ್ದಾರೆ. ಇದು ನೀವು ಪ್ರಜಾಪ್ರಭುತ್ವ ವ್ಯವಸ್ಥೆಗೆ ಹಾಗೂ ಶಾಸಕರನ್ನು ಮಾರಾಟದ ವಸ್ತುಗಳಂತೆ ವ್ಯಾಖ್ಯಾನಿಸಿ ಅವರಿಗೆ ಮಾಡುತ್ತಿರುವ ಅವಮಾನವಾಗಿದೆ ಎಂದು ದೂರಿದ್ದಾರೆ. ಈ ಕುರಿತಂತೆ ಜಾರಿ ನಿರ್ದೇಶನಾಲಯ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ನಡೆಸುವ ಅಗತ್ಯವಿದೆ ಎಂದು ಹೇಳಿದ್ದಾರೆ.

*****************

ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತಂತೆ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ಹೆಚ್.ಎನ್. ನಾಗಮೋಹನ ದಾಸ್ ಅಧ್ಯಕ್ಷತೆಯಲ್ಲಿ ಏಕಸದಸ್ಯ ಆಯೋಗವನ್ನು ರಚಿಸಿ ಆದೇಶ ಹೊರಡಿಸಲಾಗಿದೆ.

Empirical Data ಪಡೆದು, ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸುಗಳೊಂದಿಗೆ ಎರಡು ತಿಂಗಳ ಅವಧಿಯೊಳಗಾಗಿ ವರದಿ ಸಲ್ಲಿಸುವಂತೆ ಸರ್ಕಾರ ಸೂಚಿಸಿದೆ.

*****************

ಬೆಳಗಾವಿ- ಧಾರವಾಡ ನೇರ ರೈಲು ಕುರಿತಂತೆ ಅಧಿಕಾರಗಳ ಸಭೆ ನಡೆಸಿ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಅವರು, ಬೆಳಗಾವಿ - ಧಾರವಾಡ ನೇರ ಸಂಪರ್ಕ ರೈಲು ಮಾರ್ಗ ನಿರ್ಮಾಣಕ್ಕೆ ಭೂ ಸ್ವಾಧೀನ ಪ್ರಕ್ರಿಯೆ ಸಮಸ್ಯೆಯಾಗಿದೆ ಎಂದು ಹೇಳಿದ್ದಾರೆ.

ಲೋಕಾಪುರ- ಧಾರವಾಡ ರೈಲಿನ ಅನುಕೂಲತೆಯ ಬಗ್ಗೆ ಮುಂದಿನ ದಿನಗಳಲ್ಲಿ ಚರ್ಚಿಸಿ ಕ್ರಮ ತೆಗೆದುಕೊಳ್ಳಲಾಗುವುದು. ಬೆಳಗಾವಿ- ಬೆಂಗಳೂರು ಮಧ್ಯೆ ವಂದೇ ಭಾರತ್ ರೈಲು ಮುಂದಿನ ತಿಂಗಳು ಸಂಚಾರ ಆರಂಭಿಸಲಿದೆ ಎಂದು ಸಚಿವ ಸೋಮಣ್ಣ ಸ್ಪಷ್ಟಪಡಿಸಿದ್ದಾರೆ.

*****************

**ಚನ್ನಪಟ್ಟಣ** ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಶೇಕಡ 88.81 ಮತದಾನವಾಗಿದೆ. ಒಟ್ಟು 2 ಲಕ್ಷದ 6 ಸಾವಿರದ 886 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಯಶವಂತ್ ವಿ. ಗುರುಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಡೂರು ಉಪ ಚುನಾವಣೆಯಲ್ಲಿ ಶೇಕಡ 76.24ರಷ್ಟು ಮತದಾನವಾಗಿದ್ದು, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮತ ಯಂತ್ರಗಳನ್ನು ಬಿಗಿ ಭದ್ರತೆಯಲ್ಲಿ ಇರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರ ತಿಳಿಸಿದ್ದಾರೆ. ಇದೇ 23 ರಂದು ಮತಗಳ ಎಣಿಕೆ ಕಾರ್ಯ ನಡೆಯಲಿದೆ.

*****************

ಚಿಕ್ಕಮಗಳೂರಿನಲ್ಲಿ ಕಳೆದ 5 ದಿನಗಳಿಂದ ಜಿಲ್ಲೆಯ ಆಲ್ದೂರು, ತುಡುಕೂರು ಗ್ರಾಮಗಳ ಸುತ್ತ ಮುತ್ತ ಸಂಚರಿಸುತ್ತಿದ್ದ ಕಾಡಾನೆಗಳ ಗುಂಪು ನಿನ್ನೆಯಿಂದ ವಸ್ತಾರೆ ಹೋಬಳಿಯ ಮಾರಿಕಟ್ಟೆ ಗುಡ್ಡದ ಅರಣ್ಯ ಪ್ರದೇಶದಲ್ಲಿ ಬೀಡು ಬಿಟ್ಟಿವೆ.

ಸುಮಾರು 20ಕ್ಕೂ ಹೆಚ್ಚು ಆನೆಗಳು ಈ ಭಾಗದಲ್ಲಿ ಸಂಚರಿಸುತ್ತಿದ್ದು ಡ್ರೋಣ್ ಕ್ಯಾಮೆರಾ ಬಳಸಿ ಅರಣ್ಯಾಧಿಕಾರಿಗಳು ಆನೆಗಳ ಚಲನವಲನ ಗಮನಿಸುತ್ತಿದ್ದಾರೆ.

ಜಿಲ್ಲಾ ಕಾಡಾನೆ ಟಾಸ್ಕ್ ಫೋರ್ಸ್ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಆನೆಗಳು ನಾಡಿಗೆ ಬರದಂತೆ ಕಾರ್ಯಾಚರಣೆ ನಡೆಸುತ್ತಿದೆ. ಈ ಭಾಗದ ಕದ್ರಿಮಿದ್ರಿ, ಕೆಸವಿನ ಮನೆ, ತೊಂಡವಳ್ಳಿ, ಆಲದಗುಡ್ಡೆ ಗ್ರಾಮಗಳ ಜನರು, ಕಾರ್ಮಿಕರು ಎಚ್ಚರದಿಂದಿರುವಂತೆ ಅರಣ್ಯ ಇಲಾಖೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

*****************

ಇಂದು ಭಾರತದ ಭಾರತದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರೂ ಅವರ 135ನೇ ಜನ್ಮದಿನ. ಈ ದಿನವನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಪ್ರಧಾನಿ ಮೋದಿ ಸೇರಿದಂತೆ ಹಲವು ಗಣ್ಯರು ಮಕ್ಕಳಿಗೆ ಶುಭ ಹಾರೈಸಿದ್ದಾರೆ.

ನೆಹರು ಆಧುನಿಕ ಭಾರತದ ಶಿಲ್ಪಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ಪಂಡಿತ್ ಜವಾಹರ್‌ಲಾಲ್ ನೆಹರೂರವರ 135ನೇ ವರ್ಷದ ಜನ್ಮ ದಿನಾಚರಣೆ ಅಂಗವಾಗಿ ನೆಹರು ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿದರು.

ಸುಮಾರು 17 ವರ್ಷಗಳ ಕಾಲ ದೇಶದ ಪ್ರಧಾನಿಯಾಗಿದ್ದ ನೆಹರು ಅನೇಕ ಸಮಸ್ಯೆಗಳನ್ನು ಬಗೆಹರಿಸಿದ್ದಾರೆ. ಬೃಹತ್ ಕೈಗಾರಿಕೆ, ಅಣೆಕಟ್ಟು, ನೀರಾವರಿ, ಉದ್ಯೋಗ ಸೃಷ್ಟಿ ಮಾಡಿದ್ದಾರೆ. ವಿಜ್ಞಾನ ಮತ್ತು ವೈಚಾರಿಕತೆಯಲ್ಲಿ ನಂಬಿಕೆ ಇಟ್ಟುಕೊಂಡಿದ್ದ ನೆಹರೂ ಅವರು ಸುದೀರ್ಘ ಕಾಲ ದೇಶದ ಪ್ರಧಾನಿಯಾಗಿದ್ದರು. ಇಂದು ಆಧುನಿಕ ಭಾರತವನ್ನು ನಾವು ಕಾಣುತ್ತಿದ್ದರೆ ಅದಕ್ಕೆ ನೆಹರೂ ಅವರ ಕೊಡುಗೆ ಅಪಾರ ಎಂದು ತಿಳಿಸಿದ್ದಾರೆ.

*****************

'ಮಕ್ಕಳು ಜೀವನದ ಬಗ್ಗೆ ಕನಸು ಕಾಣುವುದರ ಜೊತೆಗೆ ಜೀವನದಲ್ಲಿ ತ್ಯಾಗ ಹಾಗೂ ಶ್ರದ್ಧೆ ಇರಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ್ದಾರೆ.

ಮಕ್ಕಳ ದಿನಾಚರಣೆಯ ಅಂಗವಾಗಿ ವಿಧಾನಸೌಧದಲ್ಲಿ ನಡೆದ ಬೆಂಗಳೂರು ನಗರ ವ್ಯಾಪ್ತಿಯ ಸರ್ಕಾರಿ ಶಾಲೆಗಳ ಮಕ್ಕಳ ಜತೆಗೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 'ನೀವು ಸಾಗಿದ ಹಾದಿಯನ್ನು ಮರೆತರೆ ಫಲ ದೊರೆಯುವುದಿಲ್ಲ ಎಂದು ತಿಳಿಸಿದರು.

'ಮಕ್ಕಳೇ ಈ ದೇಶದ ಆಸ್ತಿಯಾಗಿದ್ದು, ಮುಂದಿನ ದಿನಗಳಲ್ಲಿ ವಿಧಾನಸೌಧದಲ್ಲಿ ವಿವಿಧ ಹುದ್ದೆಗಳನ್ನು ಅಲಂಕರಿಸುವ, ಅತ್ಯುನ್ನತ ಅಧಿಕಾರಿಗಳಾಗುವಂತೆ ಹಾರೈಸಿದರು.

*****************

ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಜನ್ಮ ದಿನವಾದ ಇಂದು ಮಕ್ಕಳ ದಿನಾಚರಣೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಂಭ್ರಮದಿಂದ ಆಚರಿಸಲಾಯಿತು.

ಮಕ್ಕಳ ಹಕ್ಕುಗಳಿಗೆ ಚ್ಯುತಿ ಬಂದರೆ ಕಾನೂನು ರಕ್ಷಣೆಯಿದೆ ಎಂದು ದೊಡ್ಡಬಳ್ಳಾಪುರದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಿಲ್ಪ ತಿಳಿಸಿದ್ದಾರೆ.

*****************

ಡಿಸೆಂಬರ್‌ನಲ್ಲಿ ಮಂಡ್ಯದಲ್ಲಿ ನಡೆಯಲಿರುವ ಅಖಿಲ ಭಾರತ 87ನೇ ಕನ್ನಡ ಸಾಹಿತ್ಯ ಸಮ್ಮೇಳನ, ನಿಗದಿಯಂತೆ ಮಂಡ್ಯ ನಗರದ ಸ್ಯಾಂಜೋ ಆಸ್ಪತ್ರೆ ಹಿಂಭಾಗದಲ್ಲಿ ನಡೆಯಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಗದಿಯಾಗಿರುವ ಜಾಗದ ಬಗ್ಗೆ ಪರ, ವಿರೋಧ ಚರ್ಚೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಜಾಗ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

*****************

ರಾಜ್ಯದ ಹಲವೆಡೆ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ದಕ್ಷಿಣ ಒಳನಾಡಿನ ಕರ್ನಾಟಕ, ಕರಾವಳಿ ಕರ್ನಾಟಕದಲ್ಲಿ ಇಂದಿನಿಂದ ಇನ್ನೆರಡು ದಿನಗಳ ಕಾಲ ಹಗುರದಿಂದ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ.

ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು ಹಾಗೂ ಮಂಡ್ಯ ಜಿಲ್ಲೆಗಳ ಹಲವೆಡೆ ಗುಡುಗು ಸಹಿತ ಭಾರೀ ಮಳೆಯಾಗಲಿದೆ.

ಬೆಂಗಳೂರಿನಲ್ಲೂ ಬೆಳಗ್ಗೆಯಿಂದ ತುಂತುರು ಮಳೆಯಾಗುತ್ತಿದ್ದು, ಮೋಡಕವಿದ ವಾತಾವರಣವಿದೆ.

********ಮುಕ್ತಾಯ********